# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2230

ಸದಸ್ಯರ ಹೆಸರು : ಡಾ|| ತಳವಾರ್ ಸಾಬಣ್ಣ

ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

ಉತ್ತರಿಸುವ ದಿನಾಂಕ : 18.03.2022

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಬೆಳಗಾವಿ ಕೇಂದ್ರ ಬಸ್ ನಿಲ್ದಾಣ ಕಾಮಗಾರಿ ಪ್ರಾರಂಭವಾಗಿ 5 ವರ್ಷವಾದರೂ ಇನ್ನೂ ಮುಗಿಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಆ. | ಮೂಲ ಗುತ್ತಿಗೆದಾರರ ಮತ್ತು ಲೀಸ್ ಗುತ್ತಿಗೆದಾರರ ಮಧ್ಯೆ ಇರುವ ಭಿನ್ನಾಭಿಪ್ರಾಯದ ಕಾರಣ ಕಾಮಗಾರಿ ಅಪೂರ್ಣಗೊಂಡಿರುವುದು ನಿಜವೇ; | - ಇಲ್ಲ - |
| ಇ. | ಉತ್ತರ ಕರ್ನಾಟಕದ ಮುಖ್ಯ ನಗರ ಬೆಳಗಾವಿ ಬಸ್ ನಿಲ್ದಾಣಕ್ಕೆ ಪ್ರತಿ ದಿನ ಸಾವಿರಾರು ಬಸ್ಸುಗಳು ಬರುತ್ತಿದ್ದು, ಹಳೆಯ ಬಸ್ ನಿಲ್ದಾಣದಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯ ಕಾರಣದಿಂದ ಪ್ರಯಾಣಿಕರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. ಬೆಳಗಾವಿ ಬಸ್ ನಿಲ್ದಾಣದ ಕಾಮಗಾರಿಯನ್ನು ಹಾಲಿ ಬಸ್ ನಿಲ್ದಾಣದ ಜಾಗದಲ್ಲಿಯೇ ನಿರ್ಮಿಸಲಾಗುತ್ತಿದ್ದರಿಂದ, ಹಂತಹಂತವಾಗಿ ಬಸ್ ನಿಲ್ದಾಣದ ಕಾರ್ಯಾಚರಣೆಗೆ ಹಾಗೂ ಸಾರ್ವಜನಿಕ ಪ್ರಯಾಣಿಕರಿಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ ಸುರಕ್ಷತಾ ಕ್ರಮಗಳನ್ನು ಅಳವಡಿಸಿಕೊಂಡು ನಿರ್ಮಿಸಬೇಕಾಗಿದ್ದರಿಂದ ವಿಳಂಬಕ್ಕೆ ಪ್ರಮುಖ ಕಾರಣವಾಗಿರುತ್ತದೆ.<br><br>ಅಲ್ಲದೇ, ನಗರ ಸಾರಿಗೆ ಬಸ್ ನಿಲ್ದಾಣವನ್ನು ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ ಹೊಸದಾಗಿ ನಿರ್ಮಿಸಲಾಗುತ್ತಿದ್ದರಿಂದ ಸದರಿ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ನಡೆಸುತ್ತಿದ್ದ ಬಸ್‌ಗಳನ್ನೂ ಸಹ ಕೇಂದ್ರ ಬಸ್ ನಿಲ್ದಾಣದ ಜಾಗದಲ್ಲಿಯೇ ಅವಕಾಶ |

| | | |
|---|---|---|
| | | ಮಾಡಿಕೊಟ್ಟಿರುವುದರಿಂದ ಗುತ್ತಿಗೆದಾರರಿಗೆ ಕಾಮಗಾರಿಯನ್ನು ನಿರ್ವಹಿಸಲು ತೊಂದರೆಯಾಗಿರುತ್ತದೆ.<br><br>ಮುಂದುವರೆದು, ಗುತ್ತಿಗೆದಾರರಿಂದ ಆದ ವಿಳಂಬಕ್ಕೆ ಈಗಾಗಲೇ ಹಲವಾರು ನೋಟೀಸ್ ನೀಡಿ ನಿಯಮಾನುಸಾರ ರೂ.8.00 ಲಕ್ಷಗಳವರೆಗೆ ದಂಡವನ್ನೂ ಸಹ ವಿಧಿಸಲಾಗಿದೆ. ಪ್ರಸ್ತುತ ಕಾಮಗಾರಿಯು ಪ್ರತಿ ಶತ 80ರಷ್ಟು ಪೂರ್ಣಗೊಂಡಿರುತ್ತದೆ. |
| ಈ. | 2019ರಲ್ಲಿ ಪೂರ್ಣಗೊಳ್ಳಬೇಕಾಗಿದ್ದ ಬೆಳಗಾವಿ ಕೇಂದ್ರ ಬಸ್ ನಿಲ್ದಾಣವನ್ನು ಶೀಘ್ರದಲ್ಲಿ ಪೂರ್ಣಗೊಳಿಸಿ ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡಲಾಗುವುದೆ? | ಸದರಿ ಬಸ್ ನಿಲ್ದಾಣದ ಕಾಮಗಾರಿಯನ್ನು ಜೂನ್-2022ರ ಅಂತ್ಯದ ವೇಳೆಗೆ ಪೂರ್ಣಗೊಳಿಸಿ ಪ್ರಯಾಣಿಕರ ಉಪಯೋಗಕ್ಕೆ ಬಿಟ್ಟುಕೊಡುವುದರ ಮೂಲಕ ಅನುಕೂಲ ಮಾಡಿಕೊಡಲಾಗುವುದು. |

ಸಂಖ್ಯೆ: ಟಿಡಿ 109 ಟಿಸಿಕ್ಯೂ 2022

**(ಬಿ.ಶ್ರೀರಾಮುಲು)**
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು